ಕರ್ನಾಟಕ ಸರ್ಕಾರ

**ಜುಲೈ 31, 2017**

# ಮಾಜಿ ಶಾಸಕ ಬಿ ಬಿ ಶಿವಪ್ಪ ಅವರ ನಿಧನಕ್ಕೆ ಮುಖ್ಯಮಂತ್ರಿ ಸಂತಾಪ

**ಬೆಂಗಳೂರು, ಜುಲೈ 31:**

ಭಾರತೀಯ ಜನತಾ ಪಕ್ಷದ ಮುಖಂಡ ಹಾಗೂ ಮಾಜಿ ಶಾಸಕ ಬಿ ಬಿ ಶಿವಪ್ಪ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಕರ್ನಾಟಕದಲ್ಲಿ ಭಾರತೀಯ ಜನತಾ ಪಕ್ಷದ ಬೆಳವಣಿಗೆಗೆ ಬುನಾದಿ ಹಾಕಿದವರಲ್ಲಿ ಮಹತ್ವದ ಪಾತ್ರ ವಹಿಸಿದ್ದ ಬಿ ಬಿ ಶಿವಪ್ಪ ಅವರು ತಮ್ಮ ನೇರ ಮಾತಿಗೆ ಹೆಸರಾಗಿದ್ದರು. ಅಂತೆಯೇ, ಎಲ್ಲಾ ಪಕ್ಷಗಳ ಪ್ರಮುಖರೊಂದಿಗೆ ಉತ್ತಮ ಸ್ನೇಹ ಹಾಗೂ ಒಡನಾಟವನ್ನು ಇರಿಸಿಕೊಂಡಿದ್ದ ಬಿ ಬಿ ಶಿವಪ್ಪ ಅವರು ರಾಜ್ಯ ವಿಧಾನ ಸಭೆ ಹಾಗೂ ರಾಜ್ಯ ವಿಧಾನ ಪರಿಷತ್ ಎರಡೂ ಸದನಗಳಲ್ಲಿ ಪರಿಣಾಮಕಾರಿಯಾಗಿ ಸೇವೆ ಸಲ್ಲಿಸಿದ್ದರು ಎಂದು ಸಿದ್ದರಾಮಯ್ಯ ಅವರು ಸ್ಮರಿಸಿದ್ದಾರೆ.

ಬಿ ಬಿ ಶಿವಪ್ಪ ಅವರ ಆತ್ಮಕ್ಕೆ ಶಾಂತಿ ದೊರೆಯಲಿ. ಶ್ರೀಯುತರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸುವ ಶಕ್ತಿಯನ್ನು ಶಿವಪ್ಪ ಅವರ ಕುಟುಂಬ ಹಾಗೂ ಅಭಿಮಾನಿ ವರ್ಗಕ್ಕೆ ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

***********

ಡಿ ಪಿ ಎಂ